**1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಃ ರವರ ನ್ಯಾಯಾಲಯ, ಮೂಡಿಗೆರೆ**

**ಸಿ.ಸಿ.1902/2025**

| | | |
|---|---|---|
| ಸಾಕ್ಷಿದಾರರ ಹೆಸರು | : ಲೋಕೇಶ್ | ಪ್ರಾಸಾ-3 |
| ತಂದೆಯ ಹೆಸರು | : ನೀಲಯ್ಯ | ಚಾಸಾ-3 |
| ವಯಸ್ಸು | : 38 ವರ್ಷ | ಪ್ರಮಾಣ ವಚನ ಬೋಧಿಸಲಾದ |
| ಉದ್ಯೋಗ | : ಕೂಲಿ | ದಿನಾಂಕಃ 28.01.2026. |
| ವಾಸಸ್ಥಳ | : ಹಳೇಕೋಟೆ | |

**:ಮುಖ್ಯ ವಿಚಾರಣೆ ಪ್ರಾಜ್ಞ್ಯಾ ಸ.ಸ.ಅ. ರವರಿಂದ:**

ನ್ಯಾಯಾಲಯದ ಮುಂದಿರುವ ಆರೋಪಿಯ ಪರಿಚಯ ನನಗಿಲ್ಲ. ಚಾಸಾ-2 ರವರ ಪರಿಚಯ ನನಗಿದೆ.

ಸಾಕ್ಷಿಯು ನಿಪಿ-3 ರ ಮಹಜರ್ ನಲ್ಲಿ ತಮ್ಮ ಸಹಿಯನ್ನು ಗುರುತಿಸಿದ್ದು, ಸದರಿ ಸಹಿಯನ್ನು ನಿಪಿ-3(ಎ) ಎಂದು ಗುರುತಿಸಲಾಯಿತು. ನಿಪಿ-4 ರ ಪೋಟೋದಲ್ಲಿ ತಮ್ಮ ಇರುವಿಕೆಯ ಬಗ್ಗೆ ಗುರುತಿಸುತ್ತಾರೆ. ಸಾಕ್ಷಿಯು ಎಂ.ಒ.1 ರ ಮೇಲಿನ ತಮ್ಮ ಸಹಿಯನ್ನು ಗುರುತಿಸಿ ಸದರಿ ವಸ್ತು ಹಾಗೂ ಎಂ.ಒ.2 ರ ಬಗ್ಗೆ ತಮಗೆ ಯಾವುದೇ ಮಾಹಿತಿ ಇಲ್ಲ ಎಂದು ನುಡಿಯುತ್ತಾರೆ. ಸಾಕ್ಷಿಯ ಸಹಿಯನ್ನು ಎಂ.ಒ.1(ಸಿ) ಎಂದು ಗುರುತಿಸಲಾಯಿತು.

ಕಳೆದ 7-8 ತಿಂಗಳ ಹಿಂದೆ ನಾನು ಬಣಕಲ್ ಪೋಲಿಸ್ ಠಾಣೆಯಲ್ಲಿ ನಿಪಿ-7 ಕ್ಕೆ ಸಹಿ ಮಾಡಿರುತ್ತೇನೆ. ಸದರಿ ಸಹಿಯನ್ನು ಪೋಲಿಸರ ಕೋರಿಕೆಯ ಮೇರೆಗೆ ಮಾಡಿರುತ್ತೇನೆ. ನಿಪಿ-7 ರಲ್ಲಿ ಏನನ್ನು ಬರೆಯಲಾಗಿದೆ ಎಂದು ನಾನು ಓದಿ ತಿಳಿದುಕೊಂಡಿರುವುದಿಲ್ಲ ಮತ್ತು ಪೋಲಿಸರು ನನಗೆ ಓದಿ ತಿಳಿಸಿರುವುದಿಲ್ಲ. ನಿಪಿ-8 ನ್ನು ಪೋಲಿಸ್ ಠಾಣೆಯಲ್ಲಿಯೇ ತೆಗೆದಿರುತ್ತಾರೆ. ನಾನು ಸ.5.30 ರ ಸಮಯಕ್ಕೆ ನಿಪಿ-7 ಕ್ಕೆ ಸಹಿ ಮಾಡಿರುತ್ತೇನೆ. ನನ್ನ ಜೊತೆ ಇತರರು ಯಾರು ಸಹಿ ಮಾಡಿರುತ್ತಾರೆ ಎಂಬ ಬಗ್ಗೆ ನನಗೆ ನೆನಪಿರುವುದಿಲ್ಲ. ಯಾವ ವಿಚಾರಾಕ್ಕೆ ನಮ್ಮ ಸಹಿಯನ್ನು ಪಡೆದು ಪೋಟೋಗಳನ್ನು ತೆಗೆಯಲಾಗಿದೆ ಎಂದು ನನಗೆ ಗೊತ್ತಿಲ್ಲ. ನಾವು ಸಹಿ ಮಾಡುವ ಕಾಲಕ್ಕೆ ಎಂ.ಒ.1 ಮತ್ತು 2 ರ ವಸ್ತುವನ್ನು ನೋಡಿಲ್ಲ. ನಿಪಿ-1 ರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ಪೋಲಿಸರು ನನ್ನ ಸಮಕ್ಷಮ ಏನನ್ನು ವಶಕ್ಕೆ ಪಡೆದಿಲ್ಲ. ನಾನು ಪೋಲಿಸರ ಮುಂದೆ ಯಾವುದೇ ಹೇಳಿಕೆಯನ್ನು ನೀಡಿರುವುದಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪ್ರಾಜ್ಞ್ಯಾ ಸ.ಅ.ಅ. ರವರು ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು ಅನುಮತಿ ನೀಡಿದೆ)

**ಪಾಟೀ ಸವಾಲು: ಪ್ರಾಜ್ಞ್ಯಾ ಸ.ಸ.ಅ. ರವರಿಂದ:**

ಈಗ ಓದಿ ಹೇಳಿದಂತೆ ದಿ.15.02.2024 ರಂದು ಮೂಡಿಗೆರೆ ಪೋಲಿಸರ ಮುಂದೆ ನನ್ನ ಹೇಳಿಕೆ ದಾಖಲಿಸಿಕೊಂಡಿರುತ್ತೇನೆ ಎಂದರೆ ಸರಿಯಲ್ಲ. ಸದರಿ ಹೇಳಿಕೆಯ ಭಾಗವನ್ನು ನಿಪಿ-8 ಎಂದು ಗುರುತಿಸಲಾಯಿತು.

ನನಗೆ ಪ್ರಕರಣದ ಬಗ್ಗೆ ಸಂಪೂರ್ಣ ಮಾಹಿತಿ ತಿಳಿದಿದ್ದರೂ ಸಹಾ ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು: ಆರೋಪಿ ಪರ ವಕೀಲರು ಇಲ್ಲ ಎಂದು ತಿಳಿಸಿರುತ್ತಾರೆ.**
**ಮರು ವಿಚಾರಣೆ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ ಹೇ ಕೇ ಸ ಇ ಎ ಒ.,

ಸಹಿ/-

ಸಾಕ್ಷಿ ಸಹಿಃ

1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಮೂಡಿಗೆರೆ.